ಸುಧಾರಣೆ ಕಾರ್ಯಕ್ರಮವಿದ್ದು ಈ ಬಾಬ್ತಿನಲ್ಲಿ ಲಭ್ಯವಿರುವ ಆಯವ್ಯಯದನ್ವಯ ವಿದ್ಯಾರ್ಥಿಗಳಿಗೆ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ.

79(52) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ) : ಮಾನ್ಯ ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಚಾಮರಾಜನಗರ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ಹಿಂದುಳಿದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ವತಿಯಿಂದ ಮಂಜೂರಾಗಿರುವ ವಸತಿ ಶಾಲೆಗಳಲ್ಲಿ ಸ್ವಂತ ನಿವೇಶನ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ನಿವೇಶನವನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು?

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಸಚಿವರು):

ಅ) ಸರ್ಕಾರದ ಆದೇಶ ಕ್ರ.ಸಂ. ಸಕಇ 30 ಅಅನಿ 2005 ದಿನಾಂಕ: 15–09–2005 ರಲ್ಲಿ ಚಾಮರಾಜನಗರ ಟೌನ್‌ನಲ್ಲಿ ಒಂದು ಅಲ್ಪಸಂಖ್ಯಾತರ ವಸತಿ ಶಾಲೆಯನ್ನು ಮಂಜೂರು ಮಾಡಿ ಆದೇಶಿಸಿದೆ.

ಶೈಕ್ಷಣಿಕ ವರ್ಷದ ಮಧ್ಯಂತರದಲ್ಲಿ ಈ ವಸತಿ ಶಾಲೆಯನ್ನು ಮಂಜೂರು ಮಾಡಿರುವುದರಿಂದ ಪ್ರಸಕ್ತ ಸಾಲಿನಲ್ಲಿ ಪ್ರಾರಂಭಿಸಿರುವುದಿಲ್ಲ.

2006–07ನೇ ಸಾಲಿನ ಶೈಕ್ಷಣಿಕ ವರ್ಷದ ಅಡಿಯಲ್ಲಿ ವಸತಿ ಶಾಲೆಯನ್ನು ಬಾಡಿಗೆ ಕಟ್ಟಡದಲ್ಲಿ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

ಆ) ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಯವರು ಈ ವಸತಿ ಶಾಲೆಗೆ ಕನಿಷ್ಠ 10 ಎಕರೆ ಜಮೀನು ಮಂಜೂರು ಮಾಡಲು ಜಿಲ್ಲಾಧಿಕಾರಿಗಳು, ಚಾಮರಾಜನಗರ ಜಿಲ್ಲೆ ರವರಿಗೆ ಪ್ರಸ್ತಾವನೆ ಸಲ್ಲಿಸಿದ್ದಾರೆ ಹಾಗೂ ಪ್ರಸ್ತಾವನೆ ಪರಿಶೀಲನೆಯ ಹಂತದಲ್ಲಿದೆ.

80(53) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯಿಂದ ಮೊರಾರ್ಜಿ ವಸತಿ ಶಾಲೆಗಳನ್ನು ಜಿಲ್ಲಾ ಪಂಚಾಯ್ತಿಗಳಿಗೆ ವರ್ಗಾಯಿಸಲು ಕಾರಣವೇನು;

ಆ) ಈ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಕಲಿಕೆ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ತೆಗೆದುಕೊಂಡಿರುವ ಸುಧಾರಣೆ ಕ್ರಮಗಳೇನು?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು):

ಅ) ಸರ್ಕಾರದ ಆದೇಶ ಸಂಖ್ಯೆ ಗ್ರಾ.ಅ.ಪ. 209 ತಾಪಸ 2003 ದಿನಾಂಕ: 5–10–2004, ಆದೇಶ ಸಂಖ್ಯೆ ಗ್ರಾ.ಅ.ಪ. 146 ಯೋಉಮೌ 2004, ದಿನಾಂಕ: 14–10–2004 ಹಾಗೂ ಆದೇಶ ಸಂಖ್ಯೆ ಸಕಇ 461 ಪಕವಿ 2004 ದಿನಾಂಕ: 20–11–2004 ಗಳಲ್ಲಿ ಸೂಚಿಸಿರುವ ಕಾರಣಗಳ ಮೇರೆಗೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯಿಂದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಜಿಲ್ಲಾ ಪಂಚಾಯಿತಿಗಳಿಗೆ ವರ್ಗಾಯಿಸಿದೆ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.